**ದಿನಾಂಕ 19.04.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 1** ಎಂದು, ದೂರಿನ ದೃಢೀಕೃತ ಪ್ರತಿಯನ್ನು **ನಿಪಿ 2** ಎಂದು, ಸ್ಥಳ ಪಂಚನಾಮೆಯ ದೃಢೀಕೃತ ಪ್ರತಿಯನ್ನು **ನಿಪಿ 3** ಎಂದು, ನಕ್ಷೆಯ ದೃಢೀಕೃತ ಪ್ರತಿಯನ್ನು **ನಿಪಿ 4** ಎಂದು, ಐಎಮ್‌ವಿ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 5** ಎಂದು, ಗಾಯದ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು **ನಿಪಿ 6** ಎಂದು, ಮೋಟಾರು ವಾಹನ ಕಯ್ದೆಯ ಕಲಂ 133 ರಡಿ ನೀಡಿರುವ ನೋಟೀಸು ಮತ್ತು ಸದರಿ ನೋಟೀಸಿಗೆ ನೀಡಿರುವ ಉತ್ತರದ ದೃಢೀಕೃತ ಪ್ರತಿಗಳನ್ನು ಕ್ರಮವಾಗಿ **ನಿಪಿ.7 ಮತ್ತು 8** ಎಂದು, ಪೋಲೀಸ್ ಇಂಟಿಮೇಷನ್ ನ ದೃಢೀಕೃತ ಪ್ರತಿಯನ್ನು **ನಿಪಿ.9** ಎಂದು, ಡಿಸ್ಚಾರ್ಜ್ ಸಮರಿಯನ್ನು **ನಿಪಿ 10** ಎಂದು, ದೋಷಾರೋಪಣ ಪಟ್ಟಿಯ ದೃಢೀಕೃತ ಪ್ರತಿಯನ್ನು **ನಿಪಿ 11** ಎಂದು, ಮೆಡಿಕಲ್ ಬಿಲ್ಲುಗಳನ್ನು **ನಿಪಿ 12** ಎಂದು, ಮುಂಗಡ ಪಾವತಿ ರಶೀದಿಗಳನ್ನು **ನಿಪಿ.13** ಎಂದು, ಆಧಾರ್ ಕಾರ್ಡಿನ ನೋಟರಿ ಪ್ರತಿ (ಮೂಲ ದಾಖಲಾತಿಯೊಂದಿಗೆ ಹೋಲಿಕೆ ಮಾಡಿ ಮೂಲ ದಾಖಲಾತಿಯನ್ನು ಹಿಂದಿರುಗಿಸಲಾಯಿತು)ಯನ್ನು **ನಿಪಿ 14** ಎಂದು ಗುರುತಿಸಲಾಯಿತು.

1ನೇ ಎದುರುದಾರರು ಏಕ ಪಕ್ಷೀಯವಾಗಿರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

2ನೇ ಎದುರುದಾರರ ಪರ ಮಾನ್ಯ ವಕೀಲರು ಪ್ರತಿವಾದ ಪತ್ರ ಸಲ್ಲಿಸದಿರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು-ವಿಚಾರಣೆಃ ಇಲ್ಲ .**

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**
**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**